ಸರ್ಕಾರಿ ಶಾಲೆಗಳಲ್ಲಿ ಕೊಠಡಿಗಳ ಕೊರತೆ

1415(2085); ಡಾ॥ ಶಿವರಾಜ್ ಪಾಟೀಲ್ ಎಸ್. (ರಾಯಚೂರು)

ಅ) ರಾಜ್ಯದಲ್ಲಿ ಹಲವಾರು ಸರ್ಕಾರಿ ಶಾಲೆಗಳಲ್ಲಿ ಕೊಠಡಿಗಳ ಕೊರತೆಯಿಂದ ವಿದ್ಯಾರ್ಥಿಗಳ ವ್ಯಾಸಂಗಕ್ಕೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಹಾಗಿದ್ದಲ್ಲಿ, ಕೊರತೆ ಇರುವ ಕಡೆಗಳಲ್ಲಿ ಕೊಠಡಿಗಳ ನಿರ್ಮಾಣಕ್ಕಾಗಿ ಕೈಗೊಂಡಿರುವ ಕ್ರಮವೇನು;

ಆ) ರಾಯಚೂರು ತಾಲ್ಲೂಕಿನ ರಾಯಚೂರು ನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿರುವ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಲ್ಲಿ ಕೊಠಡಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕೊಠಡಿಗಳ ಕೊರತೆ ನೀಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಇ) ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಲ್ಲಿ ಕೊಠಡಿಗಳ ನಿರ್ಮಾಣದ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಎಷ್ಟು ಕೊಠಡಿಗಳ ನಿರ್ಮಾಣಕ್ಕಾಗಿ ಪ್ರಸ್ತಾವನೆ ಸರ್ಕಾರದ ಮುಂದಿದೆ;

ಈ) ಈ ಸಂಬಂಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಕಿಮ್ಮನೆ ರತ್ನಾಕರ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು)

ಅ) ಬಂದಿದೆ.

ಸರ್ವ ಶಿಕ್ಷಣ ಅಭಿಯಾನ ಯೋಜನೆಯಿಂದ 2015–16ನೇ ಸಾಲಿನಲ್ಲಿ ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ 398 ಹೆಚ್ಚುವರಿ ಕೊಠಡಿಗಳು ಮಂಜೂರಾಗಿದ್ದು, ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುವುದು.

ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ ಕಾರ್ಯಕ್ರಮದ ಅಡಿಯಲ್ಲಿ ಶಾಲಾ ಯು–ಡೈಸ್ ಅಂಕಿ–ಅಂಶಗಳ ಪ್ರಕಾರ ಅವಶ್ಯಕತೆ ಇರುವ ಸರ್ಕಾರಿ ಪ್ರೌಢ ಶಾಲೆಗಳಿಗೆ ಹೆಚ್ಚುವರಿ ಕೊಠಡಿಯನ್ನು ನಿರ್ಮಾಣ ಮಾಡಲು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುತ್ತಿದೆ.

ಆ) ಬಂದಿದೆ.

2015–16ನೇ ಸಾಲಿನಲ್ಲಿ ರಾಯಚೂರು ಜಿಲ್ಲೆಗೆ ಸರ್ವ ಶಿಕ್ಷಣ ಅಭಿಯಾನ ಯೋಜನೆಯಡಿಯಲ್ಲಿ ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ 48 ಹೆಚ್ಚುವರಿ ಕೊಠಡಿಗಳು ಮಂಜೂರಾಗಿರುತ್ತದೆ. ಕೊಠಡಿ ನಿರ್ಮಾಣ ಕಾರ್ಯ ಕೈಗೆತ್ತಿಕೊಳ್ಳಲಾಗುವುದು.

ರಾಯಚೂರು ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಪ್ರೌಢ ಶಾಲೆಗಳಿಗೆ ಶಾಲಾ ಯು–ಡೈಸ್ ಆಧರಿಸಿ ಕೊಠಡಿಗಳನ್ನು ಆರ್.ಎಂ.ಎಸ್.ಎಯಿಂದ 2009–10ನೇ ಸಾಲಿನಲ್ಲಿ 10 ಹೆಚ್ಚುವರಿ ಕೊಠಡಿ ಮಂಜೂರು ಆಗಿರುತ್ತವೆ.

ರಾಯಚೂರು ನಗರ ವಿಧಾನಸಭಾ ಕ್ಷೇತ್ರ ಪ್ರೌಢಶಾಲೆಗಳಿಗೆ 2015–16ನೇ ಸಾಲಿನಲ್ಲಿ 02 ಹೆಚ್ಚುವರಿ ಕೊಠಡಿಗಳಿಗೆ ಪ್ರಸ್ತಾವನೆ ಸಲ್ಲಿಸಲಾಗಿದೆ.

ರಾಜ್ಯ ವಲಯದ ಅನುದಾನದಡಿಯಲ್ಲಿಯೂ ಅತ್ಯಗತ್ಯ ಕಾಮಗಾರಿಗಳನ್ನು ತೆಗೆದುಕೊಳ್ಳಲು ಕ್ರಮವಹಿಸಿದೆ. ರಾಜ್ಯ ವಲಯದ ಪಂಚ ಸೌಲಭ್ಯದಡಿ ಅನುದಾನ ಕಲ್ಪಿಸಲಾಗಿದೆ ಹಾಗೂ ಆಯಾ ಆಯಾ ವಿಧಾನ ಸಭೆ ಕ್ಷೇತ್ರ ವ್ಯಾಪ್ತಿಯ ಶಾಲಾ ಕಾಲೇಜುಗಳ ಅಗತ್ಯ ಸೌಕರ್ಯ ಒದಗಿಸಲು ಪ್ರತಿ ವಿಧಾನ ಸಭಾ ಕ್ಷೇತ್ರಕ್ಕೆ ರೂ. 40.00 ಲಕ್ಷ ಕ್ರಿಯಾ ಯೋಜನೆ ಅನುಮೋದನೆ ಮಾಡಿ, ರೂ. 20.00 ಲಕ್ಷಗಳನ್ನು ಬಿಡುಗಡೆ ಮಾಡಲು ಆದೇಶಿಸಿದೆ.

ಇ) ಹೌದು,

2015–16ನೇ ಸಾಲಿಗೆ ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ ಎಸ್.ಎಸ್.ಎ ಯೋಜನೆಯಡಿಯಲ್ಲಿ 48 ಹೆಚ್ಚುವರಿ ಕೊಠಡಿಗಳ ನಿರ್ಮಾಣಕ್ಕೆ ಕ್ರಮವಹಿಸಲಾಗುವುದು.

ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ ಕಾರ್ಯಕ್ರಮದ ಅಡಿಯಲ್ಲಿ 2015–16ನೇ ಸಾಲಿನ ವಾರ್ಷಿಕ ಕ್ರಿಯಾ ಯೋಜನೆಯಲ್ಲಿ ರಾಯಚೂರು ಜಿಲ್ಲೆಗೆ ಒಟ್ಟು 56 ಹೆಚ್ಚುವರಿ ಕೊಠಡಿಗಳ ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿರುತ್ತದೆ.

ಈ) MHRDಯಿಂದ ಎಸ್.ಎಸ್.ಎ ಯೋಜನೆಗಾಗಿ ಅನುಮೋದಿತ ಶಾಲಾಪಟ್ಟಿ ಮತ್ತು ಅನುದಾನದ ವಿವರ ಬಂದ ನಂತರ ಕೊಠಡಿ ನಿರ್ಮಾಣಕ್ಕೆ ಕ್ರಮವಹಿಸಲಾಗುವುದು.

ಸದರಿ ಕಾಮಗಾರಿಗಳು ಕೇಂದ್ರ ಸರ್ಕಾರದಿಂದ ಆರ್.ಎಂ.ಎಸ್.ಎ ಯೋಜನೆಯಡಿ ಮಂಜೂರು ಆಗಿರುವುದಿಲ್ಲ.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಕಾರ್ಯಕ್ರಮಗಳು

1416(2086); ಡಾ॥ ಶಿವರಾಜ್ ಪಾಟೀಲ್ ಎಸ್. (ರಾಯಚೂರು ನಗರ)

ಅ) ಪ್ರಸಕ್ತ ಸಾಲಿನಲ್ಲಿ ವಾರ್ತಾ ಇಲಾಖೆಗೆ ನಿಗದಿ ಪಡಿಸಲಾಗಿರುವ ಅನುದಾನವೆಷ್ಟು; ಯಾವ ಯೋಜನೆಗಳಿಗೆ ಅನುದಾನ ನಿಗದಿಪಡಿಸಲಾಗಿದೆ;

ಆ) ಕಳೆದ ಮೂರು ವರ್ಷಗಳಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳ ಶಿಕ್ಷಣಕ್ಕೆ ಪೂರಕವಾಗಿ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ;

ಇ) ಕಾರ್ಯಕ್ರಮಕ್ಕೆ ನಿಗದಿ ಪಡಿಸಿದ ಅನುದಾನವೆಷ್ಟು; ಸದರಿ ಕಾರ್ಯಕ್ರಮಗಳಿಗೆ ನಿಗದಿಯಾದ ಅನುದಾನದಲ್ಲಿ ಬಳಕೆಯಾದ ಹಾಗೂ ಬಳಕೆಯಾಗದ ಅನುದಾನ ವೆಷ್ಟು; ಬಳಕೆಯಾಗದಿರಲು ಕಾರಣಗಳೇನು;